

25 ಕ್ಕೂ ಹೆಚ್ಚು ಜನ ಬಿಜೆಪಿಗೆ ಸೇರ್ಪಡೆ

ಚಿಕ್ಕನಾಯಕನಹಳ್ಳಿ: ವಿವಿಧ ಪಕ್ಷಗಳ ಮುಖಂಡರು ಹಾಗು ಕಾರ್ಯಕರ್ತರು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಜೆ.ಸಿ.ಮಾಧುಸ್ವಾಮಿ ಸಮ್ಮುಖದಲ್ಲಿ ಬಿಜೆಪಿಗೆ ಸೇರ್ಪಡೆಗೊಂಡರು.

ಪಕ್ಷದ ಜಿಲ್ಲಾ ಕಾರ್ಯದರ್ಶಿ ನಿರಂಜನ್ ಸಲಹೆಯಂತೆ ಬೆಳ್ಳಾರ ಕಾಲೋನಿಯ ರಂಗಯ್ಯ, ಮುನೇಂದ್ರ, ದೇವಿರಂಗಯ್ಯ, ನಾಗರಾಜು, ಉಮೇಶ್, ನಟರಾಜ್, ಕರಿಯಪ್ಪ ಸೇರಿದಂತೆ ಒಟ್ಟು 25 ಕ್ಕೂ ಹೆಚ್ಚು ಜನ ಬಿಜೆಪಿಗೆ ಸೇರ್ಪಡೆಗೊಂಡರು.

ಸಚಿವ ಜೆ.ಸಿ.ಮಾಧುಸ್ವಾಮಿ ಮಾತನಾಡಿ ಮನುಷ್ಯನಿಗೆ ಬದ್ದತೆ ಇದ್ದರೆ ಮಾತ್ರ ಕೆಲಸ ಮಾಡಲು ಸಾಧ್ಯ. ನಾವು ಅಧಿಕಾರ ವಹಿಸಿಕೊಂಡ ನಂತರ ಜನಪರ ಕೆಲಸಗಳಿಗೆ ಆದ್ಯತೆ ನೀಡಿದ್ದೇವೆ. ನಾವುಗಳು ನಿಮ್ಮ ಕಷ್ಟ ಸುಖಗಳಿಗೆ ಭಾಗಿಯಾಗಲು ಬಂದಿದ್ದು ಮುಂದಿನ ಚುನಾವಣೆಯಲ್ಲಿ ನಮ್ಮ ಕೈಬಲಪಡಿಸಬೇಕೆಂದು ಮನವಿ ಮಾಡಿಕೊಂಡರು.

ಜಿಲ್ಲಾ ಕಾರ್ಯದರ್ಶಿ ನಿರಂಜನ್ ಮಾತನಾಡಿ, ಸಚಿವರು ಸಾಮಾಜಿಕ ನ್ಯಾಯ ಒದಗಿಸುವಲ್ಲಿ ಮುಂದಿದ್ದಾರೆ. ಕ್ಷೇತ್ರದಲ್ಲಿ ಇವರು ಕೈಗೊಂಡಿರುವ ಅಭಿವೃದ್ಧಿ ಕಾರ್ಯಗಳನ್ನು ಮತದಾರರು ಮೆಚ್ಚಿಕೊಂಡಿದ್ದಾರೆ. ತಮ್ಮ ರಾಜಕೀಯ ಅಧಿಕಾರವನ್ನು ಕ್ಷೇತ್ರದ ಅಭಿವೃದ್ಧಿಗೆ ಬಳಸಿಕೊಂಡು ಭದ್ರಾ, ಎತ್ತಿನಹೊಳೆ, ಹೇಮಾವತಿ ಯೋಜನೆ ಜಾರಿ, ಮತ್ತು ಚಿಕ್ಕನಾಯಕನಹಳ್ಳಿಯನ್ನು ಮಾದರಿ ಕ್ಷೇತ್ರವನ್ನಾಗಿಸುವುದಕ್ಕೆ ಸಚಿವರು ಶ್ರಮಿಸಿದ್ದಾರೆ ಎಂದರು.

ಈ ವೇಳೆ ಬಿಜೆಪಿ ಜಿಲ್ಲಾ ಉಪಾಧ್ಯಕ್ಷ ಕೇಶವಮೂರ್ತಿ, ಮಾಜಿ ತಾ.ಪ.ಅಧ್ಯಕ್ಷ ಕೆಂಕೆರೆ ನವೀನ್, ಮುಖಂಡ ವಿಶ್ವನಾಥ್ ಉಪಸ್ಥಿತರಿದ್ದರು.

ಸ್ವಯಂ ಸೇವಕರಾಗಿ ಕಾರ್ಯ ನಿರ್ವಹಿಸಲು ಅರ್ಜಿ ಆಹ್ವಾನ

ಮಂಡ್ಯ: ಕೋವಿಡ್–19 ಸೊಂಕಿನಿಂದ ಪೋಷಕರನ್ನು ಕಳೆದುಕೊಂಡು ಆಘಾತಕ್ಕೆ ಒಳಗಾಗಿರುವ ಮಕ್ಕಳಿಗೆ ಭಾವನಾತ್ಮಕ, ಸಾಮಾಜಿಕ, ಶೈಕ್ಷಣಿಕ ಹಾಗೂ ಆರ್ಥಿಕ ಬೆಂಬಲ ನೀಡಲು "ಬಾಲ ಹಿತೈಷಿ" ಕಾರ್ಯಕ್ರಮದಡಿ ಮಾರ್ಗದರ್ಶಕರಾಗಿ (ಸ್ವಯಂ ಸೇವಕರಾಗಿ)ಕಾರ್ಯ ನಿರ್ವಹಿಸಲು ಆಸಕ್ತರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ವಿವಿಧ ರೀತಿಯಲ್ಲಿ ಬೆಂಬಲ ನೀಡಲು ಮುಂದೆ ಬರುವ ವ್ಯಕ್ತಿಗಳನ್ನು "ಬಾಲ ಹಿತೈಷಿ" ಯೋಜನೆಯಡಿ ಮಾರ್ಗದರ್ಶಕರೆಂದು ಬೆಂಗಳೂರಿನ ಮಕ್ಕಳ ರಕ್ಷಣಾ ನಿರ್ದೇಶನಾಲಯದಿಂದ ಸೂಕ್ತ ತರಬೇತಿ ನೀಡಲಾಗುವುದು.

ಆಸಕ್ತರು ವೆಬ್‌ಸೈಟ್ www.icps.karnataka.gov.inನಲ್ಲಿ ಲಭ್ಯವಿರುವ ಅರ್ಜಿ ನಮೂನೆಯನ್ನು ಡೌನ್‌ಲೋಡ್ ಮಾಡಿಕೊಂಡು ಭರ್ತಿ ಮಾಡಿದ ಅರ್ಜಿಯನ್ನು ಮಾರ್ಚ್ 15 ರೊಳಗಾಗಿ ನೇರವಾಗಿ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳ ಕಚೇರಿಗೆ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳ ಕಚೇರಿ ದೂ.ಸಂ: 08232–223222 ಗೆ ಸಂಪರ್ಕಿಸಬಹುದೆಂದು ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ತಿಳಿಸಿದರು.

ಕೋರ್ ಬ್ಯಾಂಕಿಂಗ್‌ನತ್ತ ಪೋಸ್ಟ್ ಆಫೀಸ್‌ಗಳು: ಎಸ್ ರಾಜೇಂದ್ರಕುಮಾರ್

ದಾವಣಗೆರೆ: ಪ್ರಸಕ್ತ ವರ್ಷದಲ್ಲಿ 1.5 ಲಕ್ಷ ಪೋಸ್ಟ್ ಆಫೀಸುಗಳು ಸಂಪೂರ್ಣವಾಗಿ ಕೋರ್ ಬ್ಯಾಂಕಿಂಗ್ ವ್ಯವಸ್ಥೆಯ ಅಡಿಯಲ್ಲಿ ಬರಲಿವೆ ಎಂದು ವಲಯದ ಚೀಫ್ ಪೋಸ್ಟ್‌ಮಾಸ್ಟರ್ ಜನರಲ್ ಎಸ್. ರಾಜೇಂದ್ರಕುಮಾರ್ ತಿಳಿಸಿದರು.

ನೆಟ್ ಬ್ಯಾಂಕಿಂಗ್, ಮೊಬೈಲ್ ಬ್ಯಾಂಕಿಂಗ್, ಎಸ್.ಎಂ.ಎಸ್. ಬ್ಯಾಂಕಿಂಗ್ ಮುಖಾಂತರ ಖಾತೆಗಳ ಆನ್‌ಲೈನ್ ನಿರ್ವಹಣೆಯ ಅವಕಾಶದ ಜೊತೆಗೆ ಪೋಸ್ಟಾಫೀಸಿನ ಖಾತೆಗಳು ಮತ್ತು ಬ್ಯಾಂಕ್ ಖಾತೆಗಳ ನಡುವೆ ಆನ್‌ಲೈನ್ ಹಣ ವರ್ಗಾವಣೆಯ ಅನುಕೂಲವೂ ಸಾಧ್ಯವಾಗಲಿದೆ. ಜೊತೆಗೆ ಗ್ರಾಮೀಣ ಪ್ರದೇಶದ ರೈತರು ಮತ್ತು ಹಿರಿಯ ನಾಗರಿಕರಿಗೆ ಸಹಾಯಕವಾಗಲಿದೆ. ಆರ್ಥಿಕ ಒಳಗೊಳ್ಳುವಿಕೆಯನ್ನು ಸಾಧ್ಯವಾಗಿಸುತ್ತದೆ ಎಂದರು.

ಕೇಂದ್ರದ ಗ್ರಾಮೀಣ ಅಭಿವೃದ್ಧಿ ಮಂತ್ರಾಲಯ ಫೆ.23 ರಂದು ಬಜೆಟ್ ಘೋಷಣೆಯ ಅನುಷ್ಠಾನದ ಕುರಿತು ಅಂಚೆ ಇಲಾಖೆಯೂ ಸೇರಿದಂತೆ ವಿವಿಧ ಇಲಾಖೆಗಳನ್ನು ಒಗ್ಗೂಡಿಸಿ ವೇಬಿನಾರ್ ಒಂದನ್ನು ಆಯೋಜಿಸಿತ್ತು. ಕರ್ನಾಟಕ ಅಂಚೆ ವಲಯದ ಚೀಫ್ ಪೋಸ್ಟ್ ಮಾಸ್ಟರ್ ಜನರಲ್ ಸಹ ಈ ವೆಬಿನಾರ್‌ನಲ್ಲಿ ಭಾಗವಹಿಸಿದ್ದರು.

ಸರ್ಕಾರದ ಎಲ್ಲ ಸಂಸ್ಥೆಗಳು ಹಾಗೂ ಮಧ್ಯಸ್ಥಿಕೆದಾರರು ಗ್ರಾಮ ಪಂಚಾಯತಿ ಮಟ್ಟದಲ್ಲಿ ಈ ಉದ್ದೇಶಕ್ಕಾಗಿ ಸಮನ್ವಯಗೊಳ್ಳಬೇಕಾದ ಅಗತ್ಯದ ಕುರಿತು ಹೆಚ್ಚಿನ ಒತ್ತು ನೀಡಲಾಯಿತು. ಗ್ರಾಮೀಣ ಭಾಗದ ಡಿಜಿಟಲ್ ಆರ್ಥಿಕ ಒಳಗೊಳ್ಳುವಿಕೆ ಮತ್ತು ಹೆಚ್ಚಿನ ಸಂಖ್ಯೆಯಲ್ಲಿ ಮಹಿಳೆಯರ ಭಾಗವಹಿಸುವಿಕೆಯ ಕುರಿತು ಗಮನ ಹರಿಸಿ, ಜಾಗೃತಿ ಮೂಡಿಸುವ ಮುಂದಾಳತ್ವವನ್ನು ಅಂಚೆ ಇಲಾಖೆಯು ನಿರ್ವಹಿಸಬೇಕಿದೆ. ಹಳ್ಳಿಗಳಲ್ಲಿರುವ ಅಂಚೆ ಕಚೇರಿಯ ಶಾಖೆಗಳನ್ನು ಸೇರಿಸಿ ಎಲ್ಲ ಅಂಚೆ ಕಚೇರಿಗಳು ಕೋರ್ ಬ್ಯಾಂಕಿಂಗ್‌ನ ಅಡಿಯಲ್ಲಿ ಬರಬೇಕು. ಆನ್‌ಲೈನ್ ಹಣ ವರ್ಗಾವಣೆ ಸೇರಿದಂತೆ ಉಳಿದೆಲ್ಲ ಸೌಲಭ್ಯಗಳು ದೇಶದ ಮೂಲೆ ಮೂಲೆಗಳನ್ನು ತಲುಪಬೇಕು. ಸಣ್ಣ ಉಳಿತಾಯದ ಪ್ರತಿನಿಧಿಗಳು, ಮಹಿಳಾ ಪ್ರಧಾನ ಕೇಂದ್ರೀಯ ಬಚತ್ ಯೋಜನಾದ ಪ್ರತಿನಿಧಿಗಳು, ಅಂಚೆ ಉಳಿತಾಯ ಖಾತೆದಾರರು, ಸ್ವ–ಸಹಾಯ ಸಂಘಗಳು ಮತ್ತು ಬ್ಯಾಂಕಿಂಗ್ ತಜ್ಞರ ಅಭಿಪ್ರಾಯಗಳನ್ನು ಈ ವೆಬಿನಾರ್‌ನಲ್ಲಿ ತೆಗೆದುಕೊಳ್ಳಲಾಯಿತು.

ಕರ್ನಾಟಕದಲ್ಲಿ ಕಳೆದ ಆರ್ಥಿಕ ವರ್ಷದಲ್ಲಿ ಸುಮಾರು 28 ಲಕ್ಷ ಫಲಾನುಭವಿಗಳಿಗೆ ಅಂಚೆ ಖಾತೆಯ ಮೂಲಕ ಸಾಮಾಜಿಕ ಭದ್ರತಾ ಪಿಂಚಣಿ ತಲುಪಿಸಲಾಗಿದೆ. ರಾಜ್ಯ ಸರಕಾರದೊಟ್ಟಿಗೆ ಕೈ ಜೋಡಿಸಿ, ಭಾಗ್ಯಲಕ್ಷ್ಮೀ ಯೋಜನೆಯ ಅಡಿಯಲ್ಲಿ ಅರ್ಹ ಹೆಣ್ಣುಮಕ್ಕಳ ಹೆಸರಿನಲ್ಲಿ 1,56,056 ಸುಕನ್ಯಾ ಸಮೃದ್ಧಿ ಖಾತೆ ತೆರೆಯಲಾಗಿದೆ. ಈ ರೀತಿಯ ಬೃಹತ್ ಯೋಜನೆಗಳ ಮೂಲಕ ಕರ್ನಾಟಕ ಅಂಚೆ ವಲಯವು ಸಕ್ರಿಯವಾಗಿ ಆರ್ಥಿಕ ಒಳಗೊಳ್ಳುವಿಕೆಯ ಮೂಲ ಉದ್ದೇಶವನ್ನು ತಳಮಟ್ಟದವರೆಗೆ ಕೊಂಡೊಯ್ಯುವಲ್ಲಿ ಸಫಲವಾಗಿದೆ. ಮುಂಬರುವ ಕೋರ್ ಬ್ಯಾಂಕಿಂಗ್ ವ್ಯವಸ್ಥೆಯ ಅನುಷ್ಠಾನವೂ ಸಹ ಇದೇ ವೇಗದಲ್ಲಿ ಕರ್ನಾಟಕದಲ್ಲಿ ಸಾಧ್ಯವಾಗಲಿದೆ. ಜನಸೇವೆಗೆ ಕರ್ನಾಟಕ ಅಂಚೆ ವಲಯ ಕಂಕಣಬದ್ಧವಾಗಿದೆ ಎಂದು ತಿಳಿಸಿದರು.

ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

ದಾವಣಗೆರೆ: 2021–22ನೇ ಸಾಲಿನಲ್ಲಿ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಅಲೆಮಾರಿ/ಅರೆ ಅಲೆಮಾರಿ ವಿದ್ಯಾರ್ಥಿಗಳಿಂದ, ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ, ಶುಲ್ಕವಿನಾಯಿತಿ, ವಿದ್ಯಾಸಿರಿ–ಊಟ ಮತ್ತು ವಸತಿ ಸಹಾಯ ಯೋಜನೆ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿಯನ್ನು ಅಹ್ವಾನಿಸಲಾಗಿದೆ.

ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವನ್ನು ಫೆ. 28 ಕ್ಕೆ ನಿಗಧಿಪಡಿಸಲಾಗಿತ್ತು. ಆದರೆ ವಿದ್ಯಾರ್ಥಿಗಳು ಮತ್ತು ಶೈಕ್ಷಣಿಕ ಸಂಸ್ಥೆಗಳಿಂದ ಅರ್ಜಿ ಸಲ್ಲಿಸುವ ದಿನಾಂಕವನ್ನು ವಿಸ್ತರಿಸಲು ಮನವಿಗಳು ಬಂದ ಕಾರಣ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕವನ್ನು ಮಾ.31 ರವರೆಗೆ ವಿಸ್ತರಿಸಲಾಗಿದೆ ಎಂದು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ತಿಳಿಸಿದರು.

ಅರ್ಜಿ ಅವಧಿ ವಿಸ್ತರಣೆ

ಮಂಡ್ಯ: ಮೆಟ್ರಿಕ್ ನಂತರದ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ –1 ಅಲೆಮಾರಿ/ ಅರೆ ಅಲೆಮಾರಿ ವಿದ್ಯಾರ್ಥಿಗಳಿಂದ 2021–22ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೂಲಕ ನೀಡಲಾಗುತ್ತಿರುವ "ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ "ಶುಲ್ಕ ವಿನಾಯಿತಿ ವಿದ್ಯಾಸಿರಿ ಊಟ ಮತ್ತು ವಸತಿ ಸಹಾಯ ಯೋಜನೆ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಸುವ ಕೊನೆಯ ದಿನಾಂಕವನ್ನು ಮಾ.31 ರವರೆಗೆ ವಿಸ್ತರಿಸಲಾಗಿದೆ.

ವಿದ್ಯಾರ್ಥಿಗಳು ವೆಬ್‌ಸೈಟ್ www.ssp.postmetric.karnataka.gov.in/maria ಮೂಲಕ ಅರ್ಜಿಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಮೊ.ಸಂ:8050770005 ಅಥವಾ 8050770004 ಸಂಪರ್ಕಿಸಬಹುದೆಂದು ಮಂಡ್ಯ ಜಿಲ್ಲೆಯ ಹಿಂದುಳಿದ ವರ್ಗಗಳ ಇಲಾಖೆಯ ಜಿಲ್ಲಾ ಅಧಿಕಾರಿ ತಿಳಿಸಿದ್ದಾರೆ.

ಕಂಪ್ಲಿಯಲ್ಲಿ 500ಮನೆಗಳ ನಿರ್ಮಾಣಕ್ಕೆ ಸಚಿವ ಶ್ರೀರಾಮುಲು ಚಾಲನೆ

ಸರ್ವರಿಗೂ ಸೂರು ಕಲ್ಪಿಸುವ ಗುರಿಯೊಂದಿಗೆ ರಾಜ್ಯದಲ್ಲಿ ವಸತಿ ಕ್ರಾಂತಿ: ಜಿಲ್ಲಾ ಉಸ್ತುವಾರಿ ಸಚಿವ ಶ್ರೀರಾಮುಲು

ಬಳ್ಳಾರಿ: ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿಯಿಂದ ಕಂಪ್ಲಿ ಪಟ್ಟಣದಲ್ಲಿ 32.87 ಕೋಟಿ ರೂ.ವೆಚ್ಚದಲ್ಲಿ 500 ಮನೆಗಳ ನಿರ್ಮಾಣಕ್ಕೆ ಸಾರಿಗೆ, ಪರಿಶಿಷ್ಟ ವರ್ಗಗಳ ಕಲ್ಯಾಣ ಸಚಿವ ಬಿ.ಶ್ರೀರಾಮುಲು ಭೂಮಿಪೂಜೆ ನೆರವೇರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಚಿವ ಶ್ರೀರಾಮುಲು ಅವರು ಗುಣಮಟ್ಟದಲ್ಲಿ ಯಾವುದೇ ರೀತಿಯಲ್ಲಿ ರಾಜಿಯಾಗದೆ ನಿಗದಿತ ಸಮಯದಲ್ಲಿ ಈ ಕೆಲಸ ಮುಗಿಸಿ ಜನರಿಗೆ ಮನೆ ಸಿಗುವಂತೆ ಮಾಡಲು ಈಗಾಗಲೇ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದರು.

ಬಡವರಿಗೆ ಸೂರು ಒದಗಿಸುವುದು ನಮ್ಮ ಸರ್ಕಾರದ ಪ್ರಮುಖ ಅದ್ಯತೆಗಳಲ್ಲಿ ಒಂದು ಎಂದು ಹೇಳಿದ ಸಚಿವ ಶ್ರೀರಾಮುಲು ಅವರು ಒಬ್ಬ ವ್ಯಕ್ತಿ ಗೌರವಯುತವಾಗಿ ಬದುಕಲು ಅನ್ನ, ನೀರು, ಸೂರು ಅತಿಮುಖ್ಯ. ಅದನ್ನ ಬಡವರಿಗೆ ಕೊಡೋ ಜವಾಬ್ದಾರಿ ಸರ್ಕಾರದ್ದು. ಈ ನಿಟ್ಟಿನಲ್ಲಿ ಅತ್ಯಂತ ನಿಷ್ಠೆಯಿಂದ, ಬಡವರ ಪರ ಕಾಳಜಿ ಇಟ್ಟುಕೊಂಡು ನಮ್ಮ ಸರ್ಕಾರ ಕೆಲಸ ಮಾಡುತ್ತಿದೆ ಎಂದರು.

ಕಳೆದ ಬಜೆಟ್ ನಲ್ಲಿ (2021–22) ಈಗಾಗಲೇ ಆರಂಭವಾಗಿ, ಪ್ರಗತಿಯಲ್ಲಿರುವ 9.74 ಲಕ್ಷ ಮನೆಗಳನ್ನು ಮುಂದಿನ 3 ವರ್ಷಗಳಲ್ಲಿ ಪೂರ್ಣಗೊಳಿಸಲು 10,194 ಕೋಟಿ ರೂ.ಅನುದಾನ ಕಾಯ್ದಿರಿಸಲಾಗಿದೆ ಎಂದರು.

ಗುಡಿಸಲು ಮುಕ್ತ ನಗರ ಹಾಗೂ ಗುಡಿಸಲು ಮುಕ್ತ ಗ್ರಾಮಗಳ ಗುರಿಯನ್ನು ನಮ್ಮ ಸರ್ಕಾರ ಹೊಂದಿದ್ದು, ಇದೀಗ ಸರ್ಕಾರದಿಂದ, ಗ್ರಾಮೀಣ ಭಾಗದಲ್ಲಿ 4 ಲಕ್ಷ ಮನೆಗಳು, ನಗರ ಪ್ರದೇಶಗಳಲ್ಲಿ 1 ಲಕ್ಷ ಮನೆಗಳು ಹಾಗೂ ಕೊಳಗೇರಿಗಳಲ್ಲಿ 97 ಸಾವಿರ ಮನೆಗಳ ನಿರ್ಮಾಣ ಕೆಲಸ ನಡೆಯುತ್ತಿದೆ ಎಂದು ವಿವರಿಸಿದ ಅವರು ಎಲ್ಲರಿಗೂ ಸೂರು ಕಲ್ಪಿಸುವ ಗುರಿಯೊಂದಿಗೆ ರಾಜ್ಯದಲ್ಲಿ ಇಂದು ವಸತಿ ಕ್ರಾಂತಿ ನಡೆಯುತ್ತಿದೆ ಎಂದರು.

ರಾಜ್ಯದ ಸ್ಲಂಗಳಲ್ಲಿ 2.80ಲಕ್ಷ ಮನೆಗಳ ಬೇಡಿಕೆ: ರಾಜ್ಯದಲ್ಲಿ ಸುಮಾರು 2,800 ಸ್ಲಮ್ ಗಳಿದ್ದು, 2.80 ಲಕ್ಷ ಮನೆಗಳ ಬೇಡಿಕೆ ಇದೆ. ಈ ನಿಟ್ಟಿನಲ್ಲಿ ಈ ಹಿಂದೆ 83,119 ಮನೆಗಳ ನಿರ್ಮಾಣ ಕಾಮಗಾರಿ ಕೈಗೆತ್ತಿಕೊಂಡು, ಸುಮಾರು 50 ಸಾವಿರ ಮನೆಗಳ ನಿರ್ಮಾಣ ಕಾಮಗಾರಿ ಪೂರ್ಣಗೊಳಿಸಲಾಗಿದೆ. ಸುಮಾರು 33 ಸಾವಿರ ಮನೆಗಳ ಕಾಮಗಾರಿ ಪ್ರಗತಿಯಲ್ಲಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಶ್ರೀರಾಮುಲು ಅವರು ವಿವರಿಸಿದರು.

ಇದೀಗ ಸರ್ಕಾರದಿಂದ ಹೊಸ ಪ್ಯಾಕೇಜ್ ನಲ್ಲಿ ಸುಮಾರು 6,516 ಕೋಟಿ ವೆಚ್ಚದಲ್ಲಿ 97,134 ಮನೆಗಳ ನಿರ್ಮಾಣಕ್ಕೆ ಕಾರ್ಯಾದೇಶ ನೀಡಲಾಗಿದೆ ಎಂದರು.

ಹೀಗೆ ಬಡವರಿಗೆ ಸೂರು ನೀಡುವ ನಿಟ್ಟಿನಲ್ಲಿ ನಮ್ಮ ಸರ್ಕಾರ ಮಹತ್ವದ ಹೆಜ್ಜೆ ಇಡುತ್ತಿದ್ದು, ಕಾಮಗಾರಿಗಳನ್ನ ಆದ್ಯತೆ ಮೇಲೆ ಮುಗಿಸುವ ಕೆಲಸ ನಡೆಯುತ್ತಿದೆ ಎಂದರು.

ಜಿಲ್ಲಾ ಉಸ್ತುವಾರಿಯಾಗಿ ಜಿಲ್ಲೆಗೆ ಕಾಲಿಟ್ಟಿರುವುದು ಅಭಿವೃದ್ಧಿಗಾಗಿ: ಶ್ರೀರಾಮುಲು ಈ ಜಿಲ್ಲೆಗೆ ಕಾಲಿಟ್ಟಿರೋದು ಅಭಿವೃದ್ಧಿಗಾಗಿ. ಮತ್ತೆ ಹೇಳ್ತೇನೆ, ಅಭಿವೃದ್ಧಿಗಾಗಿ ಮಾತ್ರ ನಾನು ಇಲ್ಲಿದ್ದೇನೆ. ಬೇರೆ ಯಾವುದಕ್ಕೂ ಅಲ್ಲ. ಅಭಿವೃದ್ಧಿ ವಿಷಯದಲ್ಲಿ ಯಾರು ರಾಜಕಾರಣ ಮಾಡೋದು ಬೇಡ ಎಂದು ಜಿಲ್ಲಾ ಉಸ್ತುವಾರಿ ಸಚಿವ ಶ್ರೀರಾಮುಲು ಅವರು ಹೇಳಿದರು.

ಅಭಿವೃದ್ಧಿ ವಿಷಯದಲ್ಲಿ ಜನರು ಬಿಟ್ಟರೆ ಮತ್ತೇನು ಇರಬಾರದು. ಪಕ್ಷ, ರಾಜಕಾರಣ, ಇವೆಲ್ಲ ಚುನಾವಣೆಗೆ ಇಟ್ಟುಕೊಳ್ಳೋಣ. ಕೆಲಸದ ವಿಷಯದಲ್ಲಿ, ಅಭಿವೃದ್ಧಿ ವಿಷ್ಯದಲ್ಲಿ ಎಲ್ಲರೂ ಒಟ್ಟಾಗಿ ಕೆಲಸ ಮಾಡಿದರೆ, ಜನರಿಗೆ, ಊರಿಗೆ ಒಳ್ಳೆಯದಾಗುತ್ತೆ ಎನ್ನೋದು ಮರೆಯಬಾರದು. ಇದನ್ನು ನಾವೆಲ್ಲರೂ ಮೈಗೂಡಿಸಿಕೊಳ್ಳಬೇಕು ಎಂದು ವಿವರಿಸುತ್ತಾ ದೇವರಾಜು ಅರಸು ಅವರ ಹುಟ್ಟೂರು ಕಲ್ಲಹಳ್ಳಿಯ ತೆಂಗಿನ ತೋಟದ ಕಥೆಯನ್ನು ಉದಾರಣೆಯನ್ನಾಗಿ ನೀಡಿದರು.

ಈ ತಿಂಗಳಾಂತ್ಯಕ್ಕೆ ಕಂಪ್ಲಿ ಸಕ್ಕರೆ ಕಾರಖಾನೆ ಕಾಯಕಲ್ಪಕ್ಕೆ ಕ್ರಮ: ಕಂಪ್ಲಿಯಲ್ಲಿರುವ ಸಕ್ಕರೆ ಕಾರಖಾನೆಗೆ ಈ ತಿಂಗಳ ಅಂತ್ಯದೊಳಗೆ ಕಾಯಕಲ್ಪಕ್ಕೆ ಕ್ರಮವಹಿಸಲಾಗುವುದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಶ್ರೀರಾಮುಲು ಅವರು ಹೇಳಿದರು.

ಈ ಭಾಗದ ಜನರಿಗೆ ಕಬ್ಬು ಬೆಳೆಯುವುದಕ್ಕಾಗಿ ಬೀಜ ಹಾಗೂ ಇನ್ನಿತರ ಸಾಮಗ್ರಿಗಳನ್ನು ಶೀಘ್ರ ವಿತರಿಸಲಾಗುವುದು.ಮುಂದಿನ ವರ್ಷದೊಳಗೆ ಈ ಕಾರಖಾನೆಯಲ್ಲಿ ಕಬ್ಬು ನುರಿಸಬೇಕು ಎನ್ನುವ ಉದ್ದೇಶ ಹೊಂದಲಾಗಿದೆ. ಈ ಮೂಲಕ ಈ ಭಾಗದಲ್ಲಿ ನಿರುದ್ಯೋಗಿಗಳಿಗೆ ಉದ್ಯೋಗ ಕೊಡುವ ಕೆಲಸ ಮಾಡಲಾಗುವುದು ಎಂದರು.

ಕಂಪ್ಲಿ ಪಟ್ಟಣಕ್ಕೆ ನಿರಂತರ ಕುಡಿಯುವ ನೀರು ಪೂರೈಸುವ ಕಾಮಗಾರಿ ನಡೆಯುತ್ತಿದ್ದು,ಅದನ್ನು ಶೀಘ್ರ ಪೂರ್ಣಗೊಳಿಸಿ ಜನರಿಗೆ ನಿರಂತರ ಕುಡಿಯುವ ಕೆಲಸ ಮಾಡಲಾಗುವುದು ಎಂದರು.

ಈ ಸಂದರ್ಭದಲ್ಲಿ ಕಂಪ್ಲಿ ಪುರಸಭೆ ಅಧ್ಯಕ್ಷೆ ಶಾಂತಲಾ, ಉಪಾಧ್ಯಕ್ಷೆ ನಿರ್ಮಲಾ, ತಹಸೀಲ್ದಾರ್ ಗೌಸಿಯಾಬೇಗಂ, ಕಂಪ್ಲಿ ಪುರಸಭೆ ಮುಖ್ಯಾಧಿಕಾರಿ ಶಿವಲಿಂಗಪ್ಪ ಸೇರಿದಂತೆ ಪುರಸಭೆ ಸದಸ್ಯರು ಹಾಗೂ ಮುಖಂಡರು ಇದ್ದರು.

ಶ್ರೀಶಂಭುಲಿಗೇಶ್ವರಸ್ವಾಮಿ ಸೇವಸ್ಥಾನಕ್ಕೆ ವಿಶೇಷ ಪೂಜೆ

ಸಾಲಿಗ್ರಾಮ: ಯಾವುದೇ ಪಕ್ಷ ಬೇದವಿಲ್ಲದೇ ಒಗ್ಗಿಟ್ಟಿನಿಂದ ಮೇಲೂರು ಗ್ರಾಮದಲ್ಲಿ ಶ್ರೀ ಶಂಭುಲಿಗೇಶ್ವರಸ್ವಾಮಿ ಜಾತ್ರಾ ಮೋಹತ್ಸಹವು ನಡೆದಿದ್ದು, ಇತರ ಗ್ರಾಮಗಳ ಸಮಿತಿಯವರಿಗೆ ಮಾದರಿಯಾದಂತ್ತಿತ್ತು ಎಂದು ಮಾಜಿ ಮೂಡ ಅಧ್ಯಕ್ಷ ಹರದನಹಳ್ಳಿ ವಿಜಯ್‌ಕುಮಾರ್ ಹೇಳಿದರು.

ಅವರು ತಮ್ಮ ತಾಲೂಕಿನ ಮೇಲೂರು ಶ್ರೀ ಶಂಭುಲಿಗೇಶ್ವರಸ್ವಾಮಿ ಸೇವಸ್ಥಾನಕ್ಕೆ ವಿಶೇಷ ಪೂಜೆ ಸಲ್ಲಿಸಿ ನಂತರ ಮಾತನಾಡಿ, ಕೆಲವು ರಾಜಕೀಯ ಪಕ್ಷಗಳಿಂದಲೆ ಹಲವೆಡೆ ಗ್ರಾಮಗಳಲ್ಲಿ ಹಬ್ಬ ಹರಿದಿನಗಳು ನಿಂತಿರುವುದು ಅದು ಬೇಸರದ ವಿಷಯ. ಆದರೆ ಈ ಗ್ರಾಮದಲ್ಲಿ ನಡೆಯುತ್ತಿರುವ ಈ ಜಾತ್ರಾ ಮೊಹತ್ಸವ ಮತ್ತು ಬಸವೇಶ್ವರ ಮೇರವಣಿಗೆ ಉತ್ಸಹ ಹಾಗೂ ಅನ್ನಸಂದರ್ಪಣೆ ಕಾರ್ಯಕ್ರಮಗಳು ತುಂಬ ಅಚ್ಚು ಕಟ್ಟಾಗಿ ನಡೆಯುತ್ತಿದೆ. ಈದೇ ರೀತಿ ಸಮಿತಿಯ ಎಲ್ಲಾ ಸದಸ್ಯರು ಮುಂದುವರಿಸಿಕೊಂಡು ಹೋಗಲಿ. ಸಮಿತಿ ಬಯಸಿದರೆ ಕಾರ್ಯಕ್ರಮಕ್ಕೆ ನಮ್ಮ ಸಹಕಾರವು ಇರುತ್ತದೆ ಎಂದರು.

ಇದಕ್ಕೂ ಮುನ್ನ ದೇವಸ್ಥಾನದಲ್ಲಿ ಮಂಗಳವಾರ ರಾತ್ರಿ ಗ್ರಾಮದ ಶ್ರೀ ಬಸವೇಶ್ವರ ಸ್ವಾಮಿಯನ್ನು ಮೇರವಣಿಗೆ ಮಾಡುವ ಮೂಲಕ ಶ್ರೀ ಶಂಭುಲಿಗೇಶ್ವರ ದೇವಸ್ಥಾನಕ್ಕೆ ತಂದು ಶಿವರಾತ್ರಿ ಹಬ್ಬದ ವಿಶೇಷ ಹೋಮ ಅವನ ಪೂಜೆ ಜಾಗರಾಣರಯಲ್ಲಿ ಶಿವನ ನಾಮಸ್ಮರಣೆ ನಡೆದವು. ಬುಧವಾರ ಬೆಳಗ್ಗೆ ನಡೆದ ಶ್ರೀ ಶಂಭುಲಿಂಗೇಶ್ವರ ಸ್ವಾಮಿ ಜಾತ್ರಾ ಮೋಹತ್ಸವಕ್ಕೆ ಹೆಚ್ಚು ಭಕ್ತರು ಭಾಗವಹಿಸಿದರು ಇಲ್ಲಿ ನೆರೆದಿದ್ದ ಎಲ್ಲಾ ಸಾರ್ವಜನಿಕರಿಗೆ ಸಮಿತಿಯ ವತಿಯಿಂದ ಉಚಿತ ಅನ್ನ ಸಂದರ್ಪಣೆ ಏರ್ಪಡಿಸಲಾಯಿತು. ರೈತಸಂಘ ಸೇರಿದಂತೆ ಗ್ರಾಮದ ಎಲ್ಲಾ ಸಂಘ ಸಂಸ್ಥೆ ಮತ್ತು ಗ್ರಾಮದ ಮುಖಂಡರು ಹಾಗೂ ಗಣ್ಯರು ಭಾಗವಹಿಸಿದರು.

ಈ ಸಂದರ್ಭದಲ್ಲಿ ಗ್ರಾಪಂ ಅಧ್ಯಕ್ಷ ನರೇಂದ್ರ ಕುಮಾರ್, ಸದಸ್ಯ ಗೌತಮ್, ಮಾಜಿ ಅಧ್ಯಕ್ಷ ತುಳಸಿರಾಮ್, ಮಧು, ಸ್ವಾಮಿಶೆಟ್ಟಿ, ಕೃಷ್ಣೇಗೌಡ, ಸಿನೇಗೌಡ, ಹಸಿರುಸೇನೆ ಶಿವಕುಮಾರ್, ವಿಶ್ವ, ಮಾಜಿ ಮೈಮುಲ್ ಅಧ್ಯಕ್ಷ ಹಾಗೂ ಹಾಲಿ ನಿರ್ದೇಶಕ ಎ.ಟಿ.ಸೋಮಶೇಖರ್, ಎಪಿಎಂಸಿ ಮಾಜಿ ಅಧ್ಯಕ್ಷ ಕುಪ್ಪಳ್ಳಿ ಸೋಮಶೇಖರ್. ದೇವರಾಜ್, ಶಶಿ, ಮುದುಗುಪ್ಪೆ ಕುಮಾರ್, ಬಸ್‌ಕುಮಾರ್, ಅರ್ಚಕ ಚಂದ್ರಪ್ಪ ಸೇರಿದಂತೆ ಇತರರು ಇದ್ದರು.

ಶಿವಮೊಗ್ಗದಲ್ಲಿ ಶಾಂತಿಗಾಗಿ ನಾವು ಸೌಹಾರ್ದ ಸಭೆ

ಶಿವಮೊಗ್ಗ: ಶಿವಮೊಗ್ಗ ನಗರದ ಸರ್ಕಾರಿ ನೌಕರರ ಸಂಘದ ಸಭಾಂಗಣದಲ್ಲಿ ಬುಧವಾರ ಬೆಳಿಗ್ಗೆ ವಿವಿಧ ಸಂಘಟನೆಗಳ ಸಂಯುಕ್ತಾಶ್ರಯದಲ್ಲಿ ಶಾಂತಿಗಾಗಿ ನಾವು ಸೌಹಾರ್ದ ಸಭೆ ಆಯೋಜಿಸಲಾಗಿತ್ತು.

ಸಭೆಯಲ್ಲಿ ಕೂಡಲಿ ಶೃಂಗೇರಿ ಮಹಾ ಸಂಸ್ಥಾನ ಮಠದ ವಿದ್ಯಾಭಿನವ ವಿದ್ಯಾರಣ್ಯ ಭಾರತೀ ಸ್ವಾಮೀಜಿ, ಜಡೆ ಸಂಸ್ಥಾಪನ ಮಠದ ಯೋಗಾಚಾರ್ಯ ಡಾ.ಮಹಾಂತ ಸ್ವಾಮೀಜಿ, ಶಿವಮೊಗ್ಗ ಬಸವಕೇಂದ್ರದ ಬಸವ ಮರುಳಸಿದ್ದ ಸ್ವಾಮೀಜಿ, ಮೌಲನಾ ಶಾಹುಲ್ ಹಮೀದ್ ಮುಸ್ಲಿಯಾರ್, ಜಮತ್ ವುಲ್ಮ ಇ ಹಿಂದ್ ಉಪಾಧ್ಯಕ್ಷ ಮೌಲನಾ ಇರ್ಷಾದ್ ಅಹ್ಮದ್ ಖಾನ್, ಗೋಪಾಳ ಚರ್ಚ್ ನ ಫಾದರ್ ವೀರೇಶ್ ಮೊರಾಸ್, ರೈತ ಸಂಘಟನೆಯ ಮುಖಂಡ ಕೆ.ಟಿ.ಗಂಗಾಧರ್, ಜಿಲ್ಲಾಧಿಕಾರಿ ಡಾ.ಆರ್.ಸೆಲ್ವಮಣಿ, ಜಿಲ್ಲಾ ರಕ್ಷಣಾಧಿಕಾರಿ ಎಂ.ಬಿ.ಲಕ್ಷ್ಮೀಪ್ರಸಾದ್, ಮುಖಂಡ ಕೆ.ಪಿ.ಶ್ರೀಪಾಲ್ ಸೇರಿದಂತೆ ಮೊದಲಾದವರು ಉಪಸ್ಥಿತರಿದ್ದರು.

ಎನ್‌ಜಿಟಿ ಆದೇಶಕ್ಕೆ ಬೆಲೆ ಕೊಡದ ಬಿಎಂಟಿಸಿ

ಬೆಂಗಳೂರು: ಕಾರ್ಬನ್ ಡೈ ಆಕ್ಸೈಡ್ ಸೇರಿದಂತೆ ವಿಷಕಾರಿ ಹೊಗೆಯುಗುಳುವ ಮೂಲಕ ಪರಿಸರಕ್ಕೆ ಹಾನಿ ಉಂಟು ಮಾಡುವ ಬಸ್‌ಗಳನ್ನು ಕಾರ್ಯಾಚರಣೆಗೆ ಇಳಿಸಬಾರದು ಎಂದು ರಾಷ್ಟ್ರೀಯ ಹಸಿರು ನ್ಯಾಯಾಧಿಕರಣ (ಎನ್‌ಜಿಟಿ) ಆದೇಶ ನೀಡಿರುವ ಹೊರತಾಗಿಯೂ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ (ಬಿಎಂಟಿಸಿ) ಅದನ್ನು ಪಾಲಿಸುತ್ತಿಲ್ಲ ಎಂಬ ಆರೋಪಗಳು ಕೇಳಿಬಂದಿವೆ. ಅಂತೆಯೇ ಓಡಾಟದ ಅವಧಿ ಮುಗಿದ ಬಸ್‌ಗಳ ಸಂಚಾರಕ್ಕೆ ನ್ಯಾಯಾಧಿಕರಣ ತಡೆ ನೀಡಿದ್ದರೂ ಅಂಥ ಬಸ್‌ಗಳು ರಸ್ತೆಯಲ್ಲಿ ಸಂಚರಿಸುತ್ತಿವೆ ಎಂಬುದಾಗಿಯೂ ನಾಗರಿಕರು ದೂರಿದ್ದಾರೆ.

ಕರ್ನಾಟಕದಲ್ಲಿ ಹಳೆಯದಾದ ಡೀಸೆಲ್ ವಾಹನಗಳ ಬಳಕೆಯಿಂದ ಭಾರೀ ಪ್ರಮಾಣದಲ್ಲಿ ಮಾಲಿನ್ಯ ಉಂಟಾಗುತ್ತಿದ್ದು, ಸರಕಾರ ಈ ನಿಟ್ಟಿನಲ್ಲಿ ಯಾವುದೇ ರೀತಿಯ ಕ್ರಮ ಕೈಗೊಳ್ಳುತ್ತಿಲ್ಲ ಎಂದು ಆರೋಪಿಸಿ ವಿನಯ್ ಶಿವಾನಂದ ನಾಯಕ್ ಎಂಬವರು 2016ರಲ್ಲಿ ರಾಷ್ಟ್ರೀಯ ಹಸಿರು ನ್ಯಾಯಾಧಿಕರಣ(ಎನ್‌ಜಿಟಿ)ಕ್ಕೆ ಅರ್ಜಿ ಸಲ್ಲಿಸಿದ್ದರು. ಪ್ರಕರಣದ ವಿಚಾರಣೆ ನಡೆಸಿದ್ದ ಕೋರ್ಟ್ ನಗರದೊಳಗಿನ ಮಾಲಿನ್ಯ ತಡೆಯಲು ಕಠಿಣ ಕ್ರಮ ಕೈಗೊಳ್ಳುವಂತೆ ಬಿಂಟಿಸಿಗೆ ಆದೇಶ ನೀಡಿತ್ತು. ಅದಾಗ್ಯೂ, ಹೊಸ 1000 ಡೀಸೆಲ್ ಬಸ್ ಖರೀದಿಸಲು ಬಿಎಂಟಿಸಿ ಮುಂದಾಗಿತ್ತು. ಬಳಿಕ ಆ ನಿರ್ಧಾರಕ್ಕೆ ಎನ್‌ಜಿಟಿ ತಡೆಯಾಜ್ಞೆ ತಂದಿತ್ತು.

ಬಿಎಂಟಿಸಿ ಸಂಸ್ಥೆಯು ವಿದ್ಯುತ್ ಚಾಲಿತ ಅಥವಾ ನೈಸರ್ಗಿಕ ಅನಿಲದಂತಹ ಸ್ವಚ್ಛ ಇಂಧನಗಳಿಂದ ಸಂಚರಿಸುವ ಬಸ್‌ಗಳನ್ನಷ್ಟೇ ಖರೀದಿಸಬೇಕು ಎಂದೂ ವಿಚಾರಣೆ ವೇಳೆ ನ್ಯಾಯಪೀಠ ಆದೇಶ ನೀಡಿತ್ತು. ಆದರೆ, ಬಿಎಂಟಿಸಿ ಮಾತ್ರ ಡೀಸೆಲ್ ಬಸ್‌ಗಳನ್ನು ಖರೀದಿಸುವ ತನ್ನ ನಿರ್ಧಾರದಿಂದ ಹಿಂದೆ ಸರಿಯದೇ, ಎನ್‌ಜಿಟಿ ಆದೇಶವನ್ನು ಸ್ಪಷ್ಟವಾಗಿ ಉಲ್ಲಂಘಿಸುತ್ತಿದೆ. ಭಾರತ್ ಸ್ಟೇಜ್– 4 ಮಾನದಂಡವಿರುವ ಡೀಸೆಲ್ ಬಸ್‌ಗಳನ್ನೂ ಟೆಂಡರ್ ಮೂಲಕ ಖರೀದಿ ಮಾಡಿದೆ.

ಭಾರತ್ ಸ್ಟೇಜ್–4 ಮಾನದಂಡ ಹೊಂದಿರುವ ವಾಹನಗಳೂ ಮಾಲಿನ್ಯಕಾರಕ ಎಂಬುದನ್ನು 2016ರ ಆದೇಶದಲ್ಲೇ ಎನ್‌ಜಿಟಿ ಸ್ಪಷ್ಟಪಡಿಸಿತ್ತು. ಆ ವೇಳೆ ಬಿಎಂಟಿಸಿ, ನಾವು ನ್ಯಾಯಾಧಿಕರಣದ ಆದೇಶದಂತೆ ಬಿಎಸ್–1, ಬಿಎಸ್ –2 ಮತ್ತು ಬಿಎಸ್–3 ಬಸ್‌ಗಳ ಬಳಕೆಯನ್ನು ಸ್ಥಗಿತಗೊಳಿಸುತ್ತೇವೆ ಮತ್ತು 2020 ರ ಏಪ್ರಿಲ್ 1 ರಿಂದ ಬಿಎಸ್–4 ಬಸ್‌ಗಳನ್ನೂ ಖರೀದಿಸುವುದಿಲ್ಲ ಎಂದಿತ್ತು. ಇಷ್ಟೆಲ್ಲ ಹೇಳಿದ ಮೇಲೂ ಬಿಎಂಟಿಸಿ ಮಾತು ತಪ್ಪಿದೆ.

ಏ. 13, 14 ಬೇಲೂರು ಚನ್ನಕೇಶವ ರಥೋತ್ಸವ

ಬೇಲೂರು: ಏ.5 ರಿಂದ ಏ.18 ತನಕ ನಡೆಯುವ ವಿಶ್ವ–ವಿಖ್ಯಾತ ಬೇಲೂರು ಚನ್ನಕೇಶವಸ್ವಾಮಿ ರಥೋತ್ಸವದ ಪೂರ್ವಭಾವಿ ಸಭೆಯನ್ನು ಪಟ್ಟಣದ ಚನ್ನಕೇಶವ ಸಭಾಭವನದಲ್ಲಿ ಅಪರ ಜಿಲ್ಲಾಧಿಕಾರಿ ಹಾಗೂ ದೇಗುಲ ಆಡಳಿತಾಧಿಕಾರಿ ಕವಿತಾರಾಜರಾಮ್ ಹಾಗೂ ಶಾಸಕ ಕೆ.ಎಸ್.ಲಿಂಗೇಶ್ ನೇತೃತ್ವದಲ್ಲಿ ನಡೆಸಲಾಯಿತು.

ಈ ವೇಳೆ ಅಪರ ಜಿಲ್ಲಾಧಿಕಾರಿ ಕವಿತಾರಾಜರಾಮ್ ಮಾತನಾಡಿ, ಕಳೆದ ಎರಡು ವರ್ಷ ಕೋವಿಡ್ ಕಾರಣದಿಂದ ಚನ್ನಕೇಶವಸ್ವಾಮಿ ರಥೋತ್ಸವ ಸ್ಥಗಿತವಾಗಿತ್ತು. ಸದ್ಯ ಕೋವಿಡ್ ಇಳಿಮುಖದಿಂದ ಜಾತ್ರೆ ನಡೆಸಲು ಅವಕಾಶ ಒದಗಿದೆ. ಈ ಕಾರಣದಿಂದ ಅದ್ದೂರಿಯಿಂದ ಕೇಶವ ಜಾತ್ರೆ ನಡೆಸಲು ಸರ್ವರು ಸಹಕಾರ ಅಗತ್ಯವಾಗಿದೆ. ಈಗಾಗಲೇ ಆರೋಗ್ಯ, ಪೊಲೀಸ್, ಸಣ್ಣನೀರಾವರಿ, ಲೋಕೋಪಯೋಗಿ, ಪುರಸಭೆ, ತಾಲೂಕು ಪಂಚಾಯಿತಿ, ಚೆಸ್ಕಾಂ ಸೇರಿದಂತೆ ಹತ್ತಾರು ಇಲಾಖೆಗಳು ಜಾತ್ರೆ ನಡೆಯುವ ಸಂದರ್ಭದಲ್ಲಿ ಯಾವ ರೀತಿ ಸಹಕಾರ ನೀಡಬೇಕು ಎಂದು ತಿಳಿಸಲಾಗಿದೆ. ಬೇಲೂರಿನ ಸಾಂಸ್ಕೃತಿಕ ಹಿರಿಮೆಯನ್ನು ಇಮ್ಮಡಿಗೊಳಿಸುವ ಹಿನ್ನಲೆಯಲ್ಲಿ ರಥೋತ್ಸವ ಸಾಕ್ಷಿಯಾಗಬೇಕಿದೆ. ಪ್ರತಿಯೊಬ್ಬರು ತಮ್ಮ–ತಮ್ಮ ಜವಾಬ್ದಾರಿಯನ್ನು ಅರಿತು ಕೆಲಸ ಮಾಡಬೇಕು ಎಂದು ಸಲಹೆ ನೀಡಿದ ಅವರು ದೇಗುಲ ಎಲ್ಲಾ ರೀತಿಯ ವ್ಯವಸ್ಥೆಗೆ ಮುಂದಾಗಬೇಕು ಎಂದರು.

ಶಾಸಕ ಕೆ.ಎಸ್.ಲಿಂಗೇಶ್ ಮಾತನಾಡಿ, ಬೇಲೂರು–ಹಳೇಬೀಡು ವಿಶ್ವದ ಭೂಪಟದಲ್ಲಿ ತನ್ನದೆಯಾದ ಛಾಪು ಮೂಡಿಸಿದ ಅಲಂಕಾರ ಮತ್ತು ಪ್ರತಿ ರಸ್ತೆಗಳಿಗೆ ಸ್ವಾಗತ ಕಾಮಾನುಗಳನ್ನು ಅಳವಡಿಸುವುದು, ಜಾತ್ರೆಗೆ ಬರುವ ಭಕ್ತರು ವಿಷ್ಣುಕಲ್ಯಾಣಿಯಲ್ಲಿ ಸ್ನಾನಕ್ಕೆ ಸಣ್ಣ ನೀರಾವರಿ ಇಲಾಖೆ ನೀರನ್ನು ಶುದ್ಧಗೊಳಿಸಿ, ಸುತ್ತಲು ಸ್ವಚ್ಛತೆ ನಡೆಸಬೇಕಿದೆ. ಜಾತ್ರೆಯ ಸಂದರ್ಭದಲ್ಲಿ ನಿರಂತರವಾಗಿ ಸ್ವಚ್ಛತೆ ನಿರ್ವಹಿಸುವ ಪೌರಕಾರ್ಮಿಕರ ಹೆಸರಿನಲ್ಲಿ ಕೊನೆಯ ದಿನ ವಿಶೇಷ ಪೂಜೆ ಸಲ್ಲಿಸಬೇಕು. ಇನ್ನು ಹೆಚ್ಚಿನ ಸಿದ್ದತೆಗೆ ಮುಂದಿನ ವಾರದಲ್ಲಿ ಸಭೆಯನ್ನು ಕರೆದು ಚರ್ಚೆ ನಡೆಸಲಾಗುತ್ತದೆ ಎಂದರು.

ಚನ್ನಕೇಶವ ದೇಗುಲದ ಕಾರ್ಯನಿರ್ವಾಹಣಾಧಿಕಾರಿ ವಿದ್ಯುಲ್ಲತಾ ಮಾತನಾಡಿ, ಒಟ್ಟು 13 ದಿನ ನಡೆಯುವ ಜಾತ್ರಾ ಮಹೋತ್ಸವದಲ್ಲಿ ಏ.13 ರಂದು ಬ್ರಹ್ಮ ರಥೋತ್ಸವ, 14 ರಂದು ನಾಡ ರಥೋತ್ಸವ ನಡೆಯುವ ದಿನ ಲಕ್ಷಾಂತರ ಜನರು ಸೇರುತ್ತಾರೆ ಎಂದ ಅವರು ಈಗಾಗಲೇ ಎರಡು ವರ್ಷದಿಂದ ಜಾತ್ರೆ ಸ್ಥಗಿತವಾದ ನಿಟ್ಟಿನಲ್ಲಿ ರಥವನ್ನು ಸೂಕ್ತ ರೀತಿಯಲ್ಲಿ ಪರಿಶೀಲನೆ ನಡೆಸಿ, ಉತ್ಸವಕ್ಕೆ ಚಾಲನೆ ನೀಡಲಾಗುತ್ತದೆ. ಬಹುತೇಕ ಎಲ್ಲಾ ಇಲಾಖೆಗಳು ಹೆಚ್ಚಿನ ಸಹಕಾರ ನೀಡಬೇಕು ಎಂದು ಮನವಿ ಮಾಡಿದರು.

ಈ ಸಂದಂದರ್ಭದಲ್ಲಿ ತಹಶೀಲ್ದಾರ್ ಮೋಹನಕುಮಾರ್, ಪುರಸಭಾ ಅಧ್ಯಕ್ಷ ಸಿ.ಎನ್.ದಾನಿ, ಪ್ರಧಾನ ಅರ್ಚಕರಾದ ಕೃಷ್ಣಸ್ವಾಮಿ ಭಟ್ಟರ್, ಶ್ರೀನಿವಾಸಭಟ್ಟರ್, ದೇಗುಲ ಕಾರ್ಯನಿರ್ವಾಹಕ ಅಧಿಕಾರಿ ವಿದ್ಯುಲ್ಲತಾ, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ರವಿಕುಮಾರ್, ಮುಖ್ಯಾಧಿಕಾರಿ ಸುಜಯಕುಮಾರ್, ಪಿಎಸ್ಐ ಶಿವಾನಂದ ಪಾಟೀಲ್, ಆರೋಗ್ಯಾಧಿಕಾರಿ ಡಾ.ವಿಜಯ್, ಪುರಸಭಾ ಸದಸ್ಯರಾದ ಜಿ.ಶಾಂತಕುಮಾರ್, ಜಗದೀಶ್, ಶ್ರೀನಿವಾಸ್, ಅಶೋಕ್, ಸಭೆಯಲ್ಲಿ ವಿವಿಧ ಇಲಾಖೆ ಅಧಿಕಾರಿಗಳು, ದೇಗುಲದ ಅಡ್ಡೆಗಾರರು, ಪಾಳ್ಯದವರು, ನಾಡ ಪಟೇಲರು, ನಾಡ ಗೌಡರು ಸೇರಿದಂತೆ ಇತರರಿದ್ದರು.

> ಬೇಲೂರಿನ ರಥಕ್ಕೆ ಐತಿಹಾಸಿಕ ಹಿನ್ನಲೆಯನ್ನು ಹೊಂದಿದೆ. ಆದರೆ ರಥದ ಬೃಹತ್ ಚಕ್ರ ಸ್ವಲ್ಪ ಮಟ್ಟಿನ ಅಡೆಚಣೆ ಇರುವ ಕಾರಣದಿಂದ ರಥೋತ್ಸವಕ್ಕೆ ಮುನ್ನವೇ ಸೂಕ್ತ ರೀತಿಯಲ್ಲಿ ಪರಿಶೀಲನೆ ನಡೆಸಬೇಕು.
>
> **–ಶ್ರೀನಿವಾಸ ಮತ್ತು ವೆಂಕಟೇಶ, ಅಡ್ಡೆಗಾರ**

ವಿದ್ಯುತ್ ವ್ಯತ್ಯಯ

ದಾವಣಗೆರೆ: ದಾವಣಗೆರೆ ನಗರ ಉಪವಿಭಾಗ–2ರ ವ್ಯಾಪ್ತಿಯ66/11ಕೆವಿ ದಾವಣಗೆರೆ ವಿದ್ಯುತ್ ವಿತರಣಾ ಕೇಂದ್ರದಿಂದ ಹೊರುಡುವ ಎಫ್18–ದುರ್ಗಾಂಬಿಕ ಮಾರ್ಗ ವ್ಯಾಪ್ತಿಯಲ್ಲಿ ದಾವಣಗೆರೆ ಸ್ಮಾರ್ಟ್‌ಸಿಟಿ ಯೋಜನೆಯಲ್ಲಿ ಕಾಮಗಾರಿಯನ್ನು ನಿರ್ವಹಿಸಬೇಕಾಗಿರುವುದರಿಂದ ಮಾ.3 ರಂದು ಬೆಳಗ್ಗೆ 10 ರಿಂದ ಸಂಜೆ 04 ಗಂಟೆಯವರೆಗೆ ಈ ಕೆಳಕಂಡ ಪ್ರದೇಶಗಳಲ್ಲಿ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದೆ.

ಎಫ್18–ದುರ್ಗಾಂಬಿಕಾ ಫೀಡರ್: ಎಮ್‌ಬಿ ಕೇರಿ, ಹೊಂಡದ ಸರ್ಕಲ್ ಸುತ್ತಮುತ್ತ, ಕಾಯಿಪೇಟೆ, ಜಾಲಿನಗರ, ಟೀಚರ್ ಕಾಲೋನಿ, ಶಿವಾಜಿ ನಗರ, ಶಿವಾಜಿ ಸರ್ಕಲ್, ಚಲುವಾದಿ ಕೇರಿ, ಇಡಬ್ಲ್ಯೂಎಸ್ ಕಾಲೋನಿ, ಹಳೇಪೇಟೆ, ಬಾರ್‌ಲೈನ್‌ರಸ್ತೆ ಹಾಗೂ ಸುತ್ತ ಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂ ತಿಳಿಸಿದೆ.

ಕನ್ನಡ ವಿವಿಯಿಂದ ಜಗದೀಶ್.ಡಿ ಅವರಿಗೆ ಡಾಕ್ಟರೇಟ್ ಪದವಿ

ಹೊಸಪೇಟೆ(ವಿಜಯನಗರ ಜಿಲ್ಲೆ): ಕನ್ನಡ ವಿಶ್ವವಿದ್ಯಾಲಯದ ಪ್ರಾಚೀನ ಇತಿಹಾಸ ಹಾಗೂ ಪುರಾತತ್ವ ಅಧ್ಯಯನ ವಿಭಾಗದಿಂದ ಸಂಶೋಧನಾ ವಿದ್ಯಾರ್ಥಿ ಜಗದೀಶ್ ಡಿ. ಅವರು ಡಾಕ್ಟರೇಟ್ ಪದವಿ ಪಡೆದಿದ್ದಾರೆ.

ಸಮಾಜ ವಿಜ್ಞಾನ ನಿಕಾಯದಲ್ಲಿ ಸಿ.ಎಸ್.ವಾಸುದೇವನ್ ಅವರ ಮಾರ್ಗದರ್ಶನದಲ್ಲಿ 'ಚಿತ್ರದುರ್ಗ ಜಿಲ್ಲೆಯ ವಿಜಯನಗರ ಕಾಲದ ದೇವಾಲಯಗಳು' ಎಂಬ ವಿಷಯದ ಮೇಲೆ ಪ್ರಬಂಧ ಮಂಡಿಸಿದ್ದಾರೆ.

ಆದ್ದರಿಂದ ಕನ್ನಡ ವಿವಿಯು ಡಾಕ್ಟರೇಟ್ ಪದವಿ ಪ್ರಶಸ್ತಿ ನೀಡಿದೆ.

ವ್ಯಾಜ್ಯ ಪೂರ್ವ ಪ್ರಕರಣಗಳು ಕೂಡ ರಾಜಿ ಮೂಲಕ ಇತ್ಯರ್ಥ: ನ್ಯಾ. ರಾಜೇಶ್ವರಿ ಹೆಗಡೆ

ದಾವಣಗೆರೆ: ರಾಷ್ಟ್ರೀಯ ಮತ್ತು ರಾಜ್ಯ ಕಾನೂನು ಸೇವಾ ಪ್ರಾಧಿಕಾರದ ನಿರ್ದೇಶನದ ಮೇರೆಗೆ ದಾವಣಗೆರೆ ಜಿಲ್ಲೆಯ ಎಲ್ಲಾ ನ್ಯಾಯಾಲಯಗಳ ಆವರಣದಲ್ಲಿ ಮಾ.12 ರಂದು ರಾಷ್ಟ್ರೀಯ ಲೋಕ್ ಅದಾಲತ್ ಆಯೋಜಿಸಲಾಗಿದೆ ಎಂದು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಅಧ್ಯಕ್ಷರು ಹಾಗೂ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ರಾಜೇಶ್ವರಿ ಎನ್. ಹೆಗಡೆ ಅವರು ತಿಳಿಸಿದರು.

ಬುಧವಾರ ಜಿಲ್ಲಾ ನ್ಯಾಯಾಲಯ ಸಭಾಂಗಣದಲ್ಲಿ ಏರ್ಪಡಿಸಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜಿಯಾಗಬಹುದಾದ ವಿವಿಧ ಪ್ರಕರಣಗಳ ಜೊತೆಗೆ, ವ್ಯಾಜ್ಯ ಪೂರ್ವ ಪ್ರಕರಣಗಳನ್ನೂ ಕೂಡ ರಾಜಿ ಸಂಧಾನದ ಮೂಲಕ ಇತ್ಯರ್ಥ ಪಡಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಮಾ.12 ರಂದು ರಾಷ್ಟ್ರೀಯ ಲೋಕ್ ಅದಾಲತ್ ಅನ್ನು ಜಿಲ್ಲೆಯಲ್ಲಿ ಆಯೋಜಿಸಿದ್ದು, ಸುಮಾರು 7948 ಪ್ರಕರಣಗಳನ್ನು ರಾಜಿ ಸಂದಾನದ ಮೂಲಕ ಇತ್ಯರ್ಥಪಡಿಸುವ ಗುರಿ ಹೊಂದಲಾಗಿದೆ. ಲೋಕ್ ಅದಾಲತ್‌ಗೆ ಇನ್ನೂ ಸಾಕಷ್ಟು ಕಾಲಾವಕಾಶ ಇರುವುದರಿಂದ ನ್ಯಾಯಲಯದಲ್ಲಿ ಬಾಕಿ ಇರುವ ಪ್ರಕರಣಗಳ ಜೊತೆಗೆ, ನ್ಯಾಯಾಲಯಕ್ಕೆ ದಾಖಲಾಗುವ ಮುನ್ನ ಅಂದರೆ, ವ್ಯಾಜ್ಯಪೂರ್ವ ಪ್ರಕರಣಗಳನ್ನೂ ಕೂಡ ಲೋಕ್ ಅದಾಲತ್‌ನಲ್ಲಿ ರಾಜಿ ಸಂಧಾನದ ಮೂಲಕ ಇತ್ಯಥಪಡಿಸಲು ಅವಕಾಶ ಒದಗಿಸಲಾಗಿದೆ. ಇದರಿಂದಾಗಿ ಕಡಿಮೆ ಸಮಯದಲ್ಲಿ ವೆಚ್ಚ ರಹಿತವಾಗಿ ವ್ಯಾಜ್ಯಗಳು ಇತ್ಯರ್ಥಗೊಳ್ಳಲಿದ್ದು, ಸಮಾಜದಲ್ಲಿ ಉತ್ತಮ ಬಾಂಧವ್ಯ ಮೂಡಲು ಲೋಕ್ ಅದಾಲತ್ ಸಹಕಾರಿಯಾಗಿದೆ ಎಂದರು.

■ ಮಾ.12 ರಂದು ರಾಷ್ಟ್ರೀಯ ಲೋಕ್‌ಅದಾಲತ್

ಕಳೆದ ಡಿ.18 ರಂದು ನಡೆಸಲಾದ ರಾಷ್ಟ್ರೀಯ ಲೋಕ್ ಅದಾಲತ್‌ನಲ್ಲಿ ಜಿಲ್ಲೆಯಲ್ಲಿ ಒಟ್ಟು 5318 ಪ್ರಕರಣಗಳು ಇತ್ಯರ್ಥಗೊಂಡು, 7,07,43,859 ಕೋಟಿ ರೂ.ಗಳ ಪರಿಹಾರ ಒದಗಿಸಲಾಗಿದೆ. ಅಭಿಯೋಜನಾ ಇಲಾಖೆ, ಪೊಲೀಸ್ ಇಲಾಖೆ, ಜೀವ ವಿಮಾ ನಿಗಮ ಅಧಿಕಾರಿಗಳು, ವಕೀಲರು, ಎಂ.ವಿ.ಸಿ ಪ್ರಕರಣದ ಅರ್ಜಿದಾರ ವಕೀಲರುಗಳು, ಭೂ ವಿಜ್ಞಾನ ಇಲಾಖೆ, ಬ್ಯಾಂಕ್ ಅಧಿಕಾರಿಗಳು, ಶಿಕ್ಷಣ ಇಲಾಖೆ ಸೇರಿದಂತೆ ಲೋಕ್ ಅದಾಲತ್ ಯಶಸ್ವಿಗೆ ಸಹಕರಿಸಿದ ಎಲ್ಲರಿಗೂ ಧನ್ಯವಾದಗಳನ್ನು ತಿಳಿಸಿದರು. ಮಾ.12 ರಂದು ಮತ್ತೊಮ್ಮೆ ರಾಷ್ಟ್ರೀಯ ಲೋಕ್ ಅದಾಲತ್ ಮೂಲಕ ಅತೀ ಹೆಚ್ಚು ಪ್ರಕರಣಗಳನ್ನು ವಿಲೇವಾರಿ ಮಾಡಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಲು ಪ್ರಾಧಿಕಾರವು ಉದ್ದೇಶಿಸಿದೆ. ಹೀಗಾಗಿ ಜಿಲ್ಲೆಯಲ್ಲಿರುವ ಎಲ್ಲಾ ನ್ಯಾಯಾಲಯಗಳ ವ್ಯಾಪ್ತಿಯಲ್ಲಿ ರಾಷ್ಟ್ರೀಯ ಲೋಕ್ ಅದಾಲತ್‌ನ್ನು ಮಾ.12 ರಂದು ಆಯೋಜಿಸಲಾಗಿದೆ ಎಂದರು.

ಜಿಲ್ಲೆಯಲ್ಲಿ ಪ್ರಸ್ತುತ 36,824 ಪ್ರಕರಣಗಳು ಬಾಕಿ ಇದ್ದು, ಈ ಪೈಕಿ ಸುಮಾರು 4 ಸಾವಿರ ಪ್ರಕರಣಗಳು ಲೋಕ್ ಅದಾಲತ್ ವ್ಯಾಪ್ತಿಗೆ ಬರುವುದಿಲ್ಲ. 14,472 ಪ್ರಕರಣಗಳು ರಾಜಿ ಮಾಡಿಕೊಳ್ಳಬಹುದಾಗಿದೆ. ನ್ಯಾಯಾಲಯದಲ್ಲಿ ಚಾಲ್ತಿಯಲ್ಲಿರುವ ಹಾಗೂ ವ್ಯಾಜ್ಯ ಪೂರ್ವ ಪ್ರಕರಣಗಳನ್ನು ಕಡಿಮೆ ಖರ್ಚಿನಲ್ಲಿ ಶೀಘ್ರವಾಗಿ ಪರಿಹರಿಸಿಕೊಳ್ಳಲು ಸಾರ್ವಜನಿಕರಿಗೆ ಲೋಕ್ ಅದಾಲತ್‌ನಲ್ಲಿ ಅವಕಾಶ ಕಲ್ಪಿಸಲಾಗಿದೆ. ರಾಜಿಯಾಗಬಲ್ಲ ಎಲ್ಲಾ ಸಿವಿಲ್ ಹಾಗೂ ಕ್ರಿಮಿನಲ್ ಪ್ರಕರಣಗಳು, ಮೋಟರ್ ವಾಹನ ಅಪಘಾತ ಪರಿಹಾರ ಪ್ರಕರಣಗಳು, ಚೆಕ್ ಅಮಾನ್ಯ ಪ್ರಕರಣಗಳು, ಭೂಸ್ವಾಧೀನ ಪರಿಹಾರ ಪ್ರಕರಣಗಳು, ಬ್ಯಾಂಕ್ ಸಾಲ ವಸೂಲಾತಿ ಪ್ರಕರಣಗಳು, ಎಂ.ಎಂ.ಡಿ.ಆರ್ ಕಾಯ್ದೆಯಡಿಯ ಪ್ರಕರಣಗಳನ್ನು ಮೆಗಾ ಲೋಕ್ ಅದಾಲತ್‌ನಲ್ಲಿ ಪರಿಹರಿಸಿ ಕೊಳ್ಳಬಹುದು. ವೈವಾಹಿಕ ಕುಟುಂಬ ನ್ಯಾಯಾಲಯದ ಪ್ರಕರಣಗಳು (ವಿಚ್ಚೇದನ ಹೊರತುಪಡಿಸಿ), ಪಿಂಚಣಿ ಪ್ರಕರಣಗಳು, ವೇತನ ಭತ್ಯೆ ಸಂಬಂಧಿಸಿದ ಪ್ರಕರಣಗಳು, ವಿದ್ಯುತ್ ಹಾಗೂ ನೀರಿನ ಶುಲ್ಕ, ಕೈಗಾರಿಕೆ ಕಾರ್ಮಿಕರ ವೇತನ, ಕಾರ್ಮಿಕ ವಿವಾದ ಇತ್ಯಾದಿ ಪ್ರಕರಣಗಳನ್ನು ಪರಸ್ಪರ ಮಾತುಕತೆಯ ಮೂಲಕ ಬಗೆಹರಿಸಿಕೊಳ್ಳಬಹುದು. ರಾಜೀ ಸಂಧಾನದ ಮೂಲಕ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಂಡಲ್ಲಿ ನ್ಯಾಯಾಲಯದ ಸಂಪೂರ್ಣ ಶುಲ್ಕವನ್ನು ಮರುಪಾವತಿ ಮಾಡಲಾಗುವುದು. ಕಕ್ಷಿಗಾರರು ಭೌತಿಕವಾಗಿ ಅಥವಾ ವಿಡಿಯೋ ಕಾನ್ಫರೆನ್ಸ್ ಮುಖಾಂತರ ನ್ಯಾಯಾಲಯಕ್ಕೆ ಹಾಜರಾಗಿ ತಮ್ಮ ಪ್ರಕರಣಗಳನ್ನು ಲೋಕ್ ಅದಾಲತ್ ಮೂಲಕ ಇತ್ಯರ್ಥಪಡಿಸಿಕೊಳ್ಳಬಹುದು ಎಂದು ನ್ಯಾ. ರಾಜೇಶ್ವರಿ ಹೆಗಡೆ ಅವರು ಹೇಳಿದರು.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಪ್ರವೀಣ್ ನಾಯಕ್ ಮಾತನಾಡಿ, ಮಾ.12 ರಂದು ಜಿಲ್ಲೆಯಲ್ಲಿ ಏರ್ಪಡಿಸಲಾಗಿರುವ ರಾಷ್ಟ್ರೀಯ ಲೋಕ್ ಅದಾಲತ್ ಕುರಿತಂತೆ ಪೊಲೀಸ್ ಇಲಾಖೆಯೊಂದಿಗೆ ಈಗಾಗಲೆ ಪೂರ್ವಭಾವಿ ಸಭೆ ನಡೆಸಿ, ರಾಜಿಯಾಗಬಹುದಾದ ಪ್ರಕರಣಗಳನ್ನು ಗುರುತಿಸಿ, ಇತ್ಯರ್ಥಕ್ಕೆ ಸಹಕಾರ ನೀಡುವಂತೆ ಸೂಚನೆ ನೀಡಲಾಗಿದೆ. ಲೋಕ್ ಅದಾಲತ್ ಕುರಿತು ವ್ಯಾಪಕ ಪ್ರಚಾರಕ್ಕೆ ಕ್ರಮ ಕೈಗೊಳ್ಳಲಾಗಿದ್ದು, ಸಾರ್ವಜನಿಕರು ಮೆಗಾ ಲೋಕ್ ಅದಾಲತ್‌ನ ಸಂಪೂರ್ಣ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಹೆಚ್ಚಿನ ಮಾಹಿತಿಗಾಗಿ ದಾವಣಗೆರೆ ಹಳೆಯ ನ್ಯಾಯಾಲಯ ಸಂಕೀರ್ಣದಲ್ಲಿರುವ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ ದಾವಣಗೆರೆ ಇವರನ್ನು ದೂ.ಸ 08192–296364, ತಾಲ್ಲೂಕು ಕಾನೂನು ಸೇವಾ ಸಮಿತಿಗಳಾದ ಹರಿಹರ 08192–296885, ಹೊನ್ನಾಳಿ 08188–251732, ಚನ್ನಗಿರಿ 08189–229195 ಮತ್ತು ಜಗಳೂರು 08196–227600 ಇವರನ್ನು ಸಂಪರ್ಕಿಸಬಹುದಾಗಿದೆ.

ಇದೆ ಸಂದರ್ಭದಲ್ಲಿ ಜಿಲ್ಲಾ ವಕೀಲರ ಸಂಘದ ಉಪಾಧ್ಯಕ್ಷರಾದ ಬಿ.ಬಿ ರಾಮಪ್ಪ ಉಪಸ್ಥಿತರಿದ್ದರು.